ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 4–11–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಕರ್ನಾಟಕ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಲ್ಲಿ ಸೇವೆಯಲ್ಲಿದ್ದು ಮೃತಪಟ್ಟ ನೌಕರರ ಅವಲಂಭಿತರಿಗೆ ಅನುಕಂಪದ ಆಧಾರದ ಮೇಲೆ ನೇಮಕಾತಿ ಆದೇಶ ವಿತರಣೆ.<br>ಅಧ್ಯಕ್ಷತೆ:<br>ವಿನಯ್ ಕುಮಾರ್ ಸೊರಕೆ<br>ನಗರಾಭಿವೃದ್ಧಿ ಸಚಿವರು. | 05–11–2015<br>ಗುರುವಾರ<br>ಬೆಳಿಗ್ಗೆ<br>10–00 ಗಂಟೆಗೆ | ಕೊಠಡಿ ಸಂಖ್ಯೆ 317, ಮೂರನೇ ಮಹಡಿ, ವಿಕಾಸಸೌಧ, ಬೆಂಗಳೂರು |
| 2. | ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯ 8ನೇ ಸಮ್ಮೇಳನ.<br>ಉದ್ಘಾಟನೆ:<br>ಸಿದ್ದರಾಮಯ್ಯ,<br>ಮುಖ್ಯಮಂತ್ರಿಗಳು,<br>ಕರ್ನಾಟಕ ಸರ್ಕಾರ<br>ಮುಖ್ಯ ಅತಿಥಿಗಳು:<br>ಎಸ್. ಆರ್. ಪಾಟೀಲ್,<br>ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆಯ ಸಚಿವರು. | 05–11–2015<br>ಗುರುವಾರ<br>ಬೆಳಿಗ್ಗೆ<br>10–00 ಗಂಟೆಗೆ | ಕುವೆಂಪು ಕಲಾಕ್ಷೇತ್ರ,<br>ಬೆಂಗಳೂರು ತಾಂತ್ರಿಕ ಮಹಾವಿದ್ಯಾಲಯ ಆವರಣ, (ಬಿ.ಐ.ಟಿ), ವಿ.ವಿ. ಪುರಂ, ಬೆಂಗಳೂರು. |

| | | | |
|---|---|---|---|
| | ಪ್ರಧಾನ ಭಾಷಣ:<br><br>ಪದ್ಮ ಭೂಷಣ ಪ್ರೊ. ಯು.ಆರ್. ರಾವ್,<br>ಅಧ್ಯಕ್ಷರು,<br>ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ. | | |
| 3. | ರವೀ ನಮನ:<br><br>ಮುಖ್ಯ ಅತಿಥಿಗಳು:<br><br>ಸಾ.ರಾ. ಗೋವಿಂದು,<br>ಅಧ್ಯಕ್ಷರು,<br>ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ,<br><br>ಎನ್.ಆರ್. ವಿಶುಕುಮಾರ್,<br>ನಿರ್ದೇಶಕರು,<br>ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ,<br><br>ಅಧ್ಯಕ್ಷತೆ:<br><br>ಎಸ್. ವಿ. ರಾಜೇಂದ್ರ ಸಿಂಗ್ ಬಾಬು,<br>ಅಧ್ಯಕ್ಯರು,<br>ಕರ್ನಾಟಕ ಚಲನಚಿತ್ರ ಅಕಾಡೆಮಿ,<br>ಬೆಂಗಳೂರು | **05–11–2015**<br><br>ಗುರುವಾರ<br><br>ಬೆಳಿಗ್ಗೆ<br><br>**11–30** ಗಂಟೆಗೆ | ಗಾಂಧೀ ಭವನ,<br>ಕುಮಾರಪಾರ್ಕ್ ರಸ್ತೆ,<br>ಬೆಂಗಳೂರು |
| 4. | ಪತ್ರಿಕಾಗೋಷ್ಠಿ:<br><br>ಕೆ.ಎಸ್. ರಾಜಣ್ಣ,<br>ರಾಜ್ಯ ಆಯುಕ್ತರು,<br>ರಾಜ್ಯ ಅಂಗವಿಕಲ ವ್ಯಕ್ತಿಗಳ ಆಯುಕ್ತರ ಕಚೇರಿ, ಬೆಂಗಳೂರು. | **05–11–2015**<br><br>ಗುರುವಾರ<br><br>ಬೆಳಿಗ್ಗೆ<br><br>**11–30** ಗಂಟೆಗೆ | ರಾಜ್ಯ ಅಂಗವಿಕಲ ವ್ಯಕ್ತಿಗಳ ಆಯುಕ್ತರ ಕಚೇರಿ, ನಂ. 55, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಕಟ್ಟಡ, 2ನೇಮಹಡಿ, ರಿಸಲ್ದಾರ್ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು 560 020. |

ನಿರ್ದೇಶಕರ ಪರವಾಗಿ

# ಪತ್ರಿಕಾ ಪ್ರಕಟಣೆ

## ಸಚಿವ ಸಂಪುಟ ಸಭೆ

ಬೆಂಗಳೂರು, ನವೆಂಬರ್ 4 (ಕರ್ನಾಟಕ ವಾರ್ತೆ)

ರಾಜ್ಯ ಸಚಿವ ಸಂಪುಟ ಸಭೆಯು ನವೆಂಬರ್ 5 ರಂದು ಬೆಳಿಗ್ಗೆ 11-30 ಗಂಟೆಗೆ ವಿಧಾನಸೌಧ ಮೂರನೇ ಮಹಡಿಯ ಸಚಿವ ಸಂಪುಟ ಸಭಾ ಮಂದಿರದಲ್ಲಿ ನಡೆಯಲಿದೆ.

ಪಲ್ಲವಿ:ಬಾಬು:ಜಿಪಿಆರ್.

## ವಿಧಾನ ಪರಿಷತ್ ಅಧಿವೇಶನ

ಬೆಂಗಳೂರು, ನವೆಂಬರ್ 4 (ಕರ್ನಾಟಕ ವಾರ್ತೆ)

ಕರ್ನಾಟಕ ವಿಧಾನ ಪರಿಷತ್ತಿನ ಅಧಿವೇಶನವು ನವೆಂಬರ್ 16 ರಿಂದ ಮಧ್ಯಾಹ್ನ 12-15 ಗಂಟೆಗೆ ಬೆಂಗಳೂರಿನ ವಿಧಾನಸೌಧದ ವಿಧಾನ ಪರಿಷತ್ ಸಭಾಂಗಣದಲ್ಲಿ ನಡೆಯಲಿದೆ. ನವೆಂಬರ್ 16 ರಿಂದ 27 ರವರೆಗೆ ಅಧಿವೇಶನ ನಡೆಯಲಿದ್ದು, ಶನಿವಾರ ಮತ್ತು ಭಾನುವಾರ ಕಾರ್ಯಕಲಾಪಗಳು ಇರುವುದಿಲ್ಲ. ಉಳಿದಂತೆ ಸರ್ಕಾರಿ ಮತ್ತು ಖಾಸಗೀ ಕಲಾಪಗಳು ನಡೆಯಲಿವೆ ಎಂದು ವಿಧಾನ ಪರಿಷತ್ತಿನ ಅಪರ ಕಾರ್ಯದರ್ಶಿ ಶ್ರೀನಿವಾಸ ಅವರು ತಿಳಿಸಿದ್ದಾರೆ.

ಪಲ್ಲವಿ:ಬಾಬು:ಜಿಪಿಆರ್.

## ಪತ್ರಿಕೋದ್ಯಮ ವೃತ್ತಿ ಕೌಶಲ್ಯ ತರಬೇತಿಗಾಗಿ ಅರ್ಜಿ ಆಹ್ವಾನ

ಬೆಂಗಳೂರು, ನವೆಂಬರ್ 4 (ಕರ್ನಾಟಕ ವಾರ್ತೆ)

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು 2015-16ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳಿಗೆ ಸೇರಿದ ಪತ್ರಿಕೋದ್ಯಮ ಪದವೀಧರರಿಗೆ ಮುದ್ರಣ ಹಾಗೂ ವಿದ್ಯುನ್ಮಾನ ಮಾಧ್ಯಮಗಳಲ್ಲಿ ವೃತ್ತಿ ರೂಪಿಸಿಕೊಳ್ಳಲು ಅನುಕೂಲವಾಗುವಂತೆ ವೃತ್ತಿ ಕೌಶಲ್ಯ ತರಬೇತಿ ನೀಡುವ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಅರ್ಹರಿಂದ ಅರ್ಜಿಗಳನ್ನು ಆಹ್ವಾನಿಸಿದೆ.

ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ/ ಇತರೆ ಹಿಂದುಳಿದ ವರ್ಗಗಳಿಗೆ ಸೇರಿದ, ಪತ್ರಿಕೋದ್ಯಮ/ ವಿದ್ಯುನ್ಮಾನ ಮಾಧ್ಯಮ/ ಸಮೂಹ ಸಂವಹನ ವಿಷಯಗಳಲ್ಲಿ ಪದವಿ/ಸ್ನಾತಕ ಪದವಿ/ ಪಿ.ಜಿ ಡಿಪ್ಲೊಮಾ

ಪಡೆದಿರುವ, ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಅಭ್ಯರ್ಥಿಯು ಪ್ರಸ್ತುತ ಸಾಲಿನಲ್ಲಿ ಇದೇ ಸ್ವರೂಪದ ತರಬೇತಿಯನ್ನು ಸರ್ಕಾರದ ಯಾವುದೇ ಇಲಾಖೆಯಿಂದ ಪಡೆದಿರಬಾರದು.

ಅರ್ಜಿಯ ನಿಗದಿತ ನಮೂನೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧಿಕೃತ ವೆಬ್‍ಸೈಟ್ www.karnatakavarthe.org ನಿಂದ ಡೌನ್‍ಲೋಡ್ ಮಾಡಿಕೊಂಡು ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ದಿನಾಂಕ 20-11-2015 ರೊಳಗಾಗಿ ಸಲ್ಲಿಸಬೇಕು. ಅಪೂರ್ಣ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಆಯ್ಕೆಯಾದ ಅಭ್ಯರ್ಥಿ ಮೂಲ ದಾಖಲೆಗಳ ಪರಿಶೀಲನೆಗೆ ಗೈರುಹಾಜರಾದಲ್ಲಿ ಮೆರಿಟ್ ಆಧಾರದ ಮೇಲೆ ಮುಂದಿನ ಅಭ್ಯರ್ಥಿಗೆ ಅವಕಾಶ ನೀಡಲಾಗುವುದು.

ಭರ್ತಿ ಮಾಡಿದ ಅರ್ಜಿಗಳನ್ನು ಕಳುಹಿಸಬೇಕಾದ ವಿಳಾಸ 'ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಂ. 17, ವಾರ್ತಾ ಸೌಧ, ಭಗವಾನ್ ಮಹಾವೀರ್ ರಸ್ತೆ, ಬೆಂಗಳೂರು- 560001' ಹಾಗೂ ಅರ್ಜಿ ಹಾಗೂ ದಾಖಲೆಗಳ ಸಾಫ್ಟ್ (ಸ್ಕ್ಯಾನ್) ಕಾಪಿಯನ್ನು scpinformationdepartment@gmail.com ಗೆ ಇ-ಮೇಲ್ ಮಾಡಲು ಕೋರಿದೆ.

## ನವೆಂಬರ್ 10 ರಂದು ಟಿಪ್ಪು ಸುಲ್ತಾನ್ ಜಯಂತಿ ಆಚರಣೆ

ಬೆಂಗಳೂರು, ನವೆಂಬರ್ 4 (ಕರ್ನಾಟಕ ವಾರ್ತೆ)

ರಾಜ್ಯ ಸರ್ಕಾರದ ವತಿಯಿಂದ ಮೈಸೂರು ಹುಲಿ ಟಿಪ್ಪು ಸುಲ್ತಾನ್ ಜಯಂತಿಯನ್ನು ಪ್ರತಿ ವರ್ಷ ನವೆಂಬರ್ 10 ರಂದು ಆಚರಿಸಲು ನಿರ್ಧರಿಸಲಾಗಿದ್ದು, ಅದರಂತೆ ಈ ಬಾರಿ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‍ನಲ್ಲಿ ಅಂದು ಈ ಕಾರ್ಯಕ್ರಮವನ್ನು ಮುಖ್ಯಮಂತ್ರಿಗಳು ಉದ್ಘಾಟಿಸಲಿದ್ದಾರೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವ ಡಾ. ಖಮರುಲ್ ಇಸ್ಲಾಂ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಸುದ್ದಿಗಾರರನ್ನುದ್ದೇಶಿಸಿ ಮಾತನಾಡಿದ ಅವರು ಗಿರೀಶ್ ಕಾರ್ನಾಡ್, ಬರಗೂರು ರಾಮಚಂದ್ರಪ್ಪ, ಬಿ. ಶೇಕ್‍ಆಲಿ, ಪ್ರೊ. ನರಸಿಂಹಯ್ಯ, ವಾಟಾಳ್ ನಾಗರಾಜ್, ತಲಕಾಡು ಚಿಕ್ಕರಂಗೇಗೌಡ ಅವರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲೂ ಸಹ ಟಿಪ್ಪು ಸುಲ್ತಾನ್ ಜಯಂತಿಯನ್ನು ಆಚರಿಸಲು ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ತಿಳಿಸಿದರು.

ಪ್ರಧಾನ ಮಂತ್ರಿಯವರ 15 ಅಂಶಗಳ ಕಾರ್ಯಕ್ರಮದಡಿ ಹಾಗೂ ರಾಜ್ಯದ ವಿವಿಧ ಇಲಾಖೆಗಳಡಿ ಅಲ್ಪಸಂಖ್ಯಾತರಿಗಾಗಿ ಇರುವ ಯೋಜನೆಗಳು ಮತ್ತು ಕಾರ್ಯಕ್ರಮಗಳ ಬಗ್ಗೆ ಅಲ್ಪಸಂಖ್ಯಾತರಲ್ಲಿ ಅರಿವು

ಮೂಡಿಸುವ ಸಂಬಂಧ ಸರ್ಕಾರಿ ಆದೇಶಗಳು ತಮ್ಮ ಅಧಿಸೂಚನೆಗಳು ಹಾಗೂ ಸಮಗ್ರ ವಿವರಗಳನ್ನೊಳಗೊಂಡ ಕೈಪಿಡಿಯನ್ನು ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗದ ವತಿಯಿಂದ ಹೊರತರಲಾಗುತ್ತಿದ್ದು, ಅಂದು ಕೈಪಿಡಿಯನ್ನು ಬಿಡುಗಡೆ ಮಾಡಲಾಗುವುದು ಎಂದು ಅವರು ತಿಳಿಸಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ, ಮೂಲ ಸೌಲಭ್ಯ ಅಭಿವೃದ್ಧಿ ಹಾಗೂ ಹಜ್ ಸಚಿವ ಆರ್. ರೋಷನ್ ಬೇಗ್ ಅವರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಪಲ್ಲವಿ:ಮಮತಾ:ಜಿಪಿಆರ್.

## ಶಾಸಕರು ಮತ್ತು ಅಧಿಕಾರಿಗಳೊಂದಿಗೆ ವಿದ್ಯುತ್ ಸುಧಾರಣೆಗೆ ಸಂಬಂಧಿಸಿದಂತೆ ಚರ್ಚೆ – ಡಿಕೆಶಿ

**ಬೆಂಗಳೂರು, ನವೆಂಬರ್ 4 (ಕರ್ನಾಟಕ ವಾರ್ತೆ)**

ರಾಜ್ಯದ ರೈತರಿಗೆ ಅನುಕೂಲವಾಗುವ ರೀತಿಯಲ್ಲಿ ವಿದ್ಯುತ್ ಸರಬರಾಜು ಮಾಡುವ ಸಂಬಂಧ ಇಂದು ಎಲ್ಲಾ ಜಿಲ್ಲೆಗಳ ಶಾಸಕರುಗಳ ಮತ್ತು ರಾಜ್ಯ ಮಟ್ಟದ ಅಧಿಕಾರಿಗಳೊಂದಿಗೆ ಚರ್ಚಿಸಲಾಗಿದ್ದು ಶೀಘ್ರದಲ್ಲೇ ಪರಿಹಾರ ಕಂಡುಕೊಳ್ಳಲಾಗುವುದು ಎಂದು ಇಂಧನ ಸಚಿವ ಡಿ. ಕೆ. ಶಿವಕುಮಾರ್ ಅವರು ತಿಳಿಸಿದರು,

ಅವರು ಇಂದು ವಿಧಾನಸೌಧದಲ್ಲಿ ಸುದ್ದಿಗಾರರನ್ನುದ್ದೇಶಿಸಿ ಮಾತನಾಡುತ್ತಾ, ರಾಜ್ಯದಲ್ಲಿ ಇಂದು 1800 ಮೆ. ವ್ಯಾಟ್ ವಿದ್ಯುತ್ ಕೊರತೆಯಿದ್ದು, ಸುಧಾರಣಾ ಕ್ರಮಗಳನ್ನು ಕೈಗೊಳ್ಳುವ ಮೂಲಕ ಇನ್ನು ಕೆಲವೇ ದಿನಗಳಲ್ಲಿ ವಿದ್ಯುತ್ ಕೊರತೆಯನ್ನು ನೀಗಿಸಲಾಗುವುದು ಎಂದು ತಿಳಿಸಿದರು.

ಜಲಾಶಯಗಳಲ್ಲಿ ನೀರಿನ ಮಟ್ಟ ತಳಕಾಣುತ್ತಿರುವ ಈ ಸಂದರ್ಭದಲ್ಲೂ ಸಹ ಗುಣಮಟ್ಟದ ವಿದ್ಯುತ್ ಒದಗಿಸುವುದು ನಮ್ಮ ಆಶಯವಾಗಿದ್ದು ಇದಕ್ಕಾಗಿ ಸುಧಾರಣಾ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದ ಅವರು, ಇನ್ನು 3–4 ದಿನಗಳಲ್ಲಿ ಯಾವ ಯಾವ ತಾಲ್ಲೂಕುಗಳಿಗೆ ಎಷ್ಟು ಪ್ರಮಾಣ ವಿದ್ಯುತ್ ಸರಬರಾಜು ಮಾಡುವುದು ಎಂಬುದರ ಬಗ್ಗೆ ಮಾಹಿತಿಯನ್ನು ಒದಗಿಸಲಾಗುವುದು ಎಂದರು.

ಅಂತೆಯೇ ಯಾವ ಫೀಡರ್ ವ್ಯಾಪ್ತಿಯಲ್ಲಿ ಯಾವ ತಾಲ್ಲೂಕಿನಲ್ಲಿ ಎಷ್ಟು ಪ್ರಮಾಣದ ವಿದ್ಯುತ್ ಸರಬರಾಜು ಅಗುತ್ತಿದೆ ಎಂಬ ಮಾಹಿತಿಯನ್ನು ಸಹ ಶಾಸಕರುಗಳಿಗೆ ಒದಗಿಸಲಾಗುವುದು ಎಂದು ತಿಳಿಸಿದರು.

ಮುಂಬರುವ ಜನವರಿ ಮಾಹೆಯಿಂದ ಶಾಲಾ ಕಾಲೇಜುಗಳ ಮಕ್ಕಳ ವ್ಯಾಸಂಗಕ್ಕೆ ಅನುಕೂಲ ಮಾಡಿಕೊಡುವ ನಿಟ್ಟಿನಲ್ಲಿ 'ಪೀಕ್ ಅವರ್' ವಿದ್ಯುತ್ ನಿಲುಗಡೆಯನ್ನು ಸ್ಥಗಿತಗೊಳಿಸಲಾಗುವುದು ಎಂದು ತಿಳಿಸಿದ ಅವರು ಇದಕ್ಕಾಗಿ ಅವಶ್ಯಕ ನೀರಿನ ಸಂಗ್ರಹಣೆಯನ್ನು ಸಹ ಕೈಗೊಳ್ಳಲಾಗುತ್ತಿದೆ ಎಂದು ಅವರು ತಿಳಿಸಿದರು.

500 ಮೆ.ವ್ಯಾಟ್ ಸೋಲಾರ್ ವಿದ್ಯುತ್ ಉತ್ಪಾದಿಸುವ ಸಂಬಂಧ ಆಯ್ದ 30 ರಿಂದ 50 ತಾಲ್ಲೂಕುಗಳಲ್ಲಿ ಸೋಲಾರ್ ಪಾರ್ಕ್ ಸ್ಥಾಪಿಸಲು ಟೆಂಡರ್ ಕರೆಯಲಾಗಿದೆ ಎಂದು ತಿಳಿಸಿದ ಅವರು, ಸಧ್ಯದಲ್ಲೇ ಕೇರಳದಲ್ಲಿ ನಡೆಯಲಿರುವ ಅಖಿಲಭಾರತ ಇಂಧನ ಸಚಿವರುಗಳ ಸಭೆಯಲ್ಲಿ ರಾಜ್ಯದ ವಿದ್ಯುತ್ ಕೊರತೆಯನ್ನು ಮನವರಿಕೆ ಮಾಡಿಕೊಟ್ಟು ಶೀಘ್ರದಲ್ಲೇ ಒಡಂಬಡಿಕೆ ಮಾಡಿಕೊಂಡು ವಿದ್ಯುತ್ ಸುಧಾರಣೆ ಕ್ರಮ ಕೈಗೊಳ್ಳಲಾಗುವುದು ಎಂದರು.

ಖಾಸಗಿ ಮತ್ತು ಸರ್ಕಾರಿ ಮೂಲ ವಲಯಗಳ ಮೂಲಕ ಸುಮಾರು 5 ರಿಂದ 6 ಸಾವಿರ ಮೆ. ವ್ಯಾಟ್‌ನಷ್ಟು ವಿದ್ಯುತ್ ಹೆಚ್ಚಳ ಮಾಡುವ ಗುರಿಹೊಂದಲಾಗಿದೆ ಎಂದು ಸಚಿವರು ಈ ಸಂದರ್ಭದಲ್ಲಿ ತಿಳಿಸಿದರು.

ಪಲ್ಲವಿ:ಮಮತಾ:ಜಿಪಿಆರ್.

## ಸಾರಿಗೆ ಅದಾಲತ್

ಬೆಂಗಳೂರು, ನವೆಂಬರ್ 4 (ಕರ್ನಾಟಕ ವಾರ್ತೆ)

ಉಪ ಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ, ಬೆಂಗಳೂರು (ಕೇಂದ್ರ) ಸಾರ್ವಜನಿಕರ ಕುಂದುಕೊರತೆ ಹಾಗೂ ಸಲಹೆಗಳನ್ನು ಪಡೆಯುವ ಸಲುವಾಗಿ ನವೆಂಬರ್ 9 ರಂದು ಮಧ್ಯಾಹ್ನ 3-00 ಗಂಟೆಗೆ ಉಪ ಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ, ಬೆಂಗಳೂರು (ಕೇಂದ್ರ) 2ನೇ ಮಹಡಿ, ಬಿ.ಡಿ.ಎ. ವಾಣಿಜ್ಯ ಸಂಕೀರ್ಣ, ಕೋರಮಂಗಲ, ಬೆಂಗಳೂರು – 560 034 ಇಲ್ಲಿ ಸಾರಿಗೆ ಅದಾಲತ್ ಏರ್ಪಡಿಸಲಾಗಿದೆ.

ಈ ಸಾರಿಗೆ ಅದಾಲತ್‌ನಲ್ಲಿ ಸಾರಿಗೆ ಇಲಾಖೆಯ ಹಿರಿಯ ಅಧಿಕಾರಿಗಳು ಹಾಜರಿದ್ದು, ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ ಸೂಕ್ತ ಪರಿಹಾರವನ್ನು ಒದಗಿಸುವ ಬಗ್ಗೆ ಕ್ರಮ ಕೈಗೊಳ್ಳುವರು.

ಪಲ್ಲವಿ:ಬಾಬು:ಜಿಪಿಆರ್.

## ಕುರಿ ಮೇಕೆಗಳಿಗೆ ಜಂತುನಾಶಕ ಔಷಧಿ

ಬೆಂಗಳೂರು, ನವೆಂಬರ್ 4 (ಕರ್ನಾಟಕ ವಾರ್ತೆ)

ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತವು ರಾಜ್ಯದ ಎಲ್ಲಾ ಕುರಿ/ಮೇಕೆಗಳಿಗೆ ಅಗತ್ಯವಿರುವಷ್ಟು ಜಂತುನಾಶಕ ಔಷಧಿಯನ್ನು ಈಗಾಗಲೇ ಸರಬರಾಜು ಮಾಡಿದ್ದು, ಕುರಿಗಾರರು ತಮ್ಮ ವ್ಯಾಪ್ತಿಯ ಪಶು ವೈದ್ಯಕೀಯ ಸಂಸ್ಥೆಯನ್ನು ಅಥವಾ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮದ ಜಿಲ್ಲಾ ಅನುಷ್ಠಾನಾಧಿಕಾರಿಗಳನ್ನು ಸಂಪರ್ಕಿಸಿ ತಮ್ಮ ಕುರಿಮೇಕೆಗಳಿಗೆ ಉಚಿತವಾಗಿ ಜಂತುನಾಶಕ

ಔಷಧಿಯನ್ನು ನವೆಂಬರ್ ಮಾಹೆಯಲ್ಲಿ ಕುಡಿಸಿ ಜಂತುಹುಳುಗಳ ಭಾದೆಯಿಂದ ರಕ್ಷಿಸಿಕೊಳ್ಳುವಂತೆ ಕರ್ನಾಟಕ ಕುರಿ ಮತ್ತು ಉಣ್ಣೆ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಕೋರಿದ್ದಾರೆ.

ಪಲ್ಲವಿ:ಜಿಪಿಆರ್.

# ರವೀ ನಮನ ಕಾರ್ಯಕ್ರಮ

ಬೆಂಗಳೂರು, ನವೆಂಬರ್ 4 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯವತಿಯಿಂದ ನವೆಂಬರ್ 5 ರಂದು ಬೆಳಿಗ್ಗೆ 11-30 ಗಂಟೆಗೆ ಬೆಂಗಳೂರು ನಗರದ ಕುಮಾರಪಾರ್ಕ್ ರಸ್ತೆಯಲ್ಲಿನ ಗಾಂಧೀ ಭವನದಲ್ಲಿ ಕನ್ನಡದ ಹೆಸರಾಂತ ಚಿತ್ರ ನಿರ್ದೇಶಕ ರವೀ (ಕೆಎಸ್‌ಎಲ್ ಸ್ವಾಮಿ) ಅವರ ಕುರಿತ ರವೀ ನಮನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ ಎಂದು ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್. ವಿ. ರಾಜೇಂದ್ರ ಸಿಂಗ್ ಬಾಬು ಅವರು ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ಸಾ.ರಾ. ಗೋವಿಂದು ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ನಿರ್ದೇಶಕ ಎನ್. ಆರ್. ವಿಶುಕುಮಾರ್ ಅವರು ಪಾಲ್ಗೊಳ್ಳುವರು.

ಮುಖ್ಯ ಅತಿಥಿಗಳಾಗಿ ಹಿರಿಯ ಕಲಾವಿದರಾದ ದ್ವಾರಕೀಶ್, ಎಸ್. ಶಿವರಾಂ, ಶ್ರೀಮತಿ ಬಿ.ವಿ. ರಾಧಾ, ಹೆಚ್.ಜಿ. ಸೋಮಶೇಖರ್ ರಾವ್, ವಿಜಯಲಕ್ಷ್ಮೀ ಸಿಂಗ್, ಎಂ.ಎಸ್. ರಮೇಶ್, ಹಿರಿಯ ಚಲನಚಿತ್ರ ನಿರ್ದೇಶಕರಾದ ಎಸ್. ಕೆ. ಭಗವಾನ್, ಗಿರೀಶ್ ಕಾಸರವಳ್ಳಿ, ಸಿ.ವಿ. ಶಿವಶಂಕರ್, ರವೀ ಅವರ ಒಡನಾಡಿ ಕೃಪಾ, ಹಿರಿಯ ಪತ್ರಕರ್ತ ಗಂಗಾಧರ್ ಮೊದಲಿಯಾರ್ ಅವರು ಪಾಲ್ಗೊಳ್ಳುವರು ಎಂದು ಹೆಚ್. ಬಿ. ದಿನೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್‌ಬಿಡಿ:ಬಾಬು:ಜಿಪಿಆರ್.

# ಈ ವಾರದ ಬೆಳ್ಳಿಸಿನಿಮಾ-ಬೆಳ್ಳಿಮಾತು: “ ಕೊಂಚಾವರಂ ” ಚಲನಚಿತ್ರ ಪ್ರದರ್ಶನ, ಸಂವಾದ

ಬೆಂಗಳೂರು, ನವೆಂಬರ್ 4 (ಕರ್ನಾಟಕ ವಾರ್ತೆ)

ಕರ್ನಾಟಕ ಚಲನಚಿತ್ರ ಅಕಾಡೆಮಿಯು ಪ್ರತಿ ಶನಿವಾರ ನಡೆಸುವ ಬೆಳ್ಳಿಸಿನಿಮಾ-ಬೆಳ್ಳಿಮಾತು ಕಾರ್ಯಕ್ರಮದಡಿ ನವೆಂಬರ್ 7 ರ ಶನಿವಾರದಂದು

ಬೆಳ್ಳಿ ಸಿನಿಮಾ " ಕೊಂಚಾವರಂ " ಚಲನಚಿತ್ರ ಪ್ರದರ್ಶನವನ್ನು ಏರ್ಪಡಿಸಿದೆ. ಈ ಚಿತ್ರದ ನಿರ್ದೇಶಕ ಪಿ. ಉಮೇಶ್ ನಾಯಕ್ ಅವರಿಂದ ಬೆಳ್ಳಿಮಾತು ಸಂವಾದ ಕಾರ್ಯಕ್ರಮ ನಡೆಯಲಿದೆ ಎಂದು ಅಕಾಡೆಮಿಯ ರಿಜಿಸ್ಟ್ರಾರ್ ಹೆಚ್. ಬಿ. ದಿನೇಶ್ ಅವರು ತಿಳಿಸಿದ್ದಾರೆ.

ಬೆಂಗಳೂರು ಮಿಲ್ಲರ್ಸ್ ರಸ್ತೆಯ ಚಾಮುಂಡೇಶ್ವರಿ ಸ್ಟುಡಿಯೋದಲ್ಲಿ ನವೆಂಬರ್ 7 ರಂದು ಸಂಜೆ 4–00 ಗಂಟೆಗೆ ನಡೆಯುವ ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕರ್ನಾಟಕ ಚಲನಚಿತ್ರ ಅಕಾಡೆಮಿಯ ಅಧ್ಯಕ್ಷ ಎಸ್. ವಿ. ರಾಜೇಂದ್ರ ಸಿಂಗ್ ಬಾಬು ಅವರು ವಹಿಸುವರು. ಮುಖ್ಯ ಅತಿಥಿಗಳಾಗಿ ಮುಖ್ಯಮಂತ್ರಿ ಅಪ್ತ ಕಾರ್ಯದರ್ಶಿ ಜಿ. ಹೀರಾ ನಾಯಕ್, ಕರ್ನಾಟಕ ತಾಂಡ್ಯ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಬೋಜ್ಯ ನಾಯಕ್ ಮತ್ತು ಕೊಂಚಾವರಂ ಚಿತ್ರದ ಕಾರ್ಯಕಾರಿ ನಿರ್ಮಾಪಕ ಆರ್. ಶೇಖರ್ ಅವರು ಪಾಲ್ಗೊಳ್ಳುವರು ಎಂದು ಹೆಚ್. ಬಿ. ದಿನೇಶ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್‌ಬಿಡಿ:ಬಾಬು:ಜಿಪಿಆರ್.

## ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರ ರಚನೆ

ಬೆಂಗಳೂರು, ನವೆಂಬರ್ 4 (ಕರ್ನಾಟಕ ವಾರ್ತೆ)

ಕರ್ನಾಟಕ ಪೊಲೀಸ್ ಕಾಯ್ದೆ, 1963 ಮತ್ತು ತಿದ್ದುಪಡಿ ಕಾಯ್ದೆ, 2012ರ ಕಲಂ 20–ಡಿ ಅಡಿ ಸರ್ಕಾರವು ವಿಭಾಗ ಮಟ್ಟದಲ್ಲಿ ಪ್ರಾದೇಶಿಕ ಆಯುಕ್ತರ ಅಧ್ಯಕ್ಷತೆಯಲ್ಲಿ ಪ್ರತಿ ಜಿಲ್ಲೆಗೆ ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರವನ್ನು ರಚಿಸಿದೆ. ಈ ಪ್ರಾಧಿಕಾರಕ್ಕೆ ಜಿಲ್ಲಾ ಪೊಲೀಸ್ ಅಧೀಕ್ಷಕರು ಮತ್ತು ಬೆಂಗಳೂರು ನಗರ ವ್ಯಾಪ್ತಿಗೆ ಸಂಬಂಧಿಸಿದಂತೆ ಅಪರ ಪೊಲೀಸ್ ಆಯುಕ್ತರು (ಆಡಳಿತ) ಇವರನ್ನು ಸದಸ್ಯ ಕಾರ್ಯದರ್ಶಿಗಳನ್ನಾಗಿ ನೇಮಕ ಮಾಡಿದೆ. ಸಾರ್ವಜನಿಕರು ಪೊಲೀಸ್ ಅಧಿಕಾರಿಗಳಾದ ಉಪ ಪೊಲೀಸ್ ಅಧೀಕ್ಷಕರು ಮತ್ತು ಅವರ ಕೆಳಗಿನ ಹಂತದ ಅಧಿಕಾರಿಗಳು ಮತ್ತು ನೌಕರರ ವಿರುದ್ಧ ದೂರು ಹಾಗೂ ಅಹವಾಲು ಇದ್ದಲ್ಲಿ ಈ ಕೆಳಕಂಡ ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರಗಳ ಅಧ್ಯಕ್ಷರು ಮತ್ತು ಸದಸ್ಯ ಕಾರ್ಯದರ್ಶಿಗಳ ಕಛೇರಿಗಳಿಗೆ ತಮ್ಮ ದೂರು ಅರ್ಜಿ ಸಲ್ಲಿಸಿ ಪರಿಹಾರ ಕಂಡುಕೊಳ್ಳಬಹುದು ಎಂದು ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರು ತಿಳಿಸಿದ್ದಾರೆ.

| ಕ್ರ. ಸಂ. | ಜಿಲ್ಲೆ | ಸದಸ್ಯ ಕಾರ್ಯದರ್ಶಿಗಳು |
|---|---|---|
| 1. | ಬೆಂಗಳೂರು ನಗರ ಜಿಲ್ಲೆ | ಅಪರ ಪೊಲೀಸ್ ಆಯುಕ್ತರು (ಆಡಳಿತ),<br>ಪೊಲೀಸ್ ಆಯುಕ್ತರ ಕಛೇರಿ, ಬೆಂಗಳೂರು ನಗರ,<br>ಇನ್ಫೆಂಟ್ರಿ ರಸ್ತೆ, ಬೆಂಗಳೂರು<br>ದೂರವಾಣಿ: 080–22943359 |
| 2. | ಬೆಂಗಳೂರು ಗ್ರಾಮಾಂತರ ಜಿಲ್ಲೆ | ಜಿಲ್ಲಾ ಪೊಲೀಸ್ ಅಧೀಕ್ಷಕರು, ಬೆಂಗಳೂರು ಜಿಲ್ಲೆ,<br>ನಂ.5, ಮಿಲ್ಲರ್ಸ್ ರಸ್ತೆ, ಬೆಂಗಳೂರು.<br>ದೂರವಾಣಿ: 080–22264350 |
| 3. | ರಾಮನಗರ ಜಿಲ್ಲೆ | ಜಿಲ್ಲಾ ಪೊಲೀಸ್ ಅಧೀಕ್ಷಕರು, ರಾಮನಗರ ಜಿಲ್ಲೆ, |

| | | |
|---|---|---|
| | | ಪೊಲೀಸ್ ಭವನ, 2ನೇ ಮಹಡಿ, ರಾಮನಗರ–59.<br>ದೂರವಾಣಿ: 080–27273700 |
| 4. | ಕೋಲಾರ ಜಿಲ್ಲೆ | ಜಿಲ್ಲಾ ಪೊಲೀಸ್ ಅಧೀಕ್ಷಕರು, ಕೋಲಾರ ಜಿಲ್ಲೆ,<br>ಎಂ.ಬಿ.ರಸ್ತೆ, ಕೋಲಾರ.<br>ದೂರವಾಣಿ: 08152–243060 |
| 5. | ಚಿಕ್ಕಬಳ್ಳಾಪುರ ಜಿಲ್ಲೆ | ಜಿಲ್ಲಾ ಪೊಲೀಸ್ ಅಧೀಕ್ಷಕರು, ಚಿಕ್ಕಬಳ್ಳಾಪುರ ಜಿಲ್ಲೆ<br>ದೂರವಾಣಿ: 08156–262000 |
| 6. | ತುಮಕೂರು ಜಿಲ್ಲೆ | ಜಿಲ್ಲಾ ಪೊಲೀಸ್ ಅಧೀಕ್ಷಕರು, ತುಮಕೂರು ಜಿಲ್ಲೆ,<br>ಬಿ.ಹೆಚ್.ರಸ್ತೆ, ತುಮಕೂರು.<br>ದೂರವಾಣಿ: 08162–272451 |
| 7. | ಚಿತ್ರದುರ್ಗ ಜಿಲ್ಲೆ | ಜಿಲ್ಲಾ ಪೊಲೀಸ್ ಅಧೀಕ್ಷಕರು, ಚಿತ್ರದುರ್ಗ ಜಿಲ್ಲೆ,<br>ತುರುವನೂರು ರಸ್ತೆ, ಚಿತ್ರದುರ್ಗ–577502.<br>ದೂರವಾಣಿ: 08194–222781 |
| 8. | ದಾವಣಗೆರೆ ಜಿಲ್ಲೆ | ಜಿಲ್ಲಾ ಪೊಲೀಸ್ ಅಧೀಕ್ಷಕರು, ದಾವಣಗೆರೆ ಜಿಲ್ಲೆ,<br>ದಾವಣಗೆರೆ.<br>ದೂರವಾಣಿ: 08192–253400 |
| 9. | ಶಿವಮೊಗ್ಗ ಜಿಲ್ಲೆ. | ಜಿಲ್ಲಾ ಪೊಲೀಸ್ ಅಧೀಕ್ಷಕರು, ಶಿವಮೊಗ್ಗ ಜಿಲ್ಲೆ,<br>ಸಾಗರ ರಸ್ತೆ, ಶಿವಮೊಗ್ಗ –577201.<br>ದೂರವಾಣಿ: 08182–261400 |

* ಈ ಮೇಲ್ಕಂಡ ಎಲ್ಲಾ ಜಿಲ್ಲಾ ಪೊಲೀಸ್ ದೂರು ಪ್ರಾಧಿಕಾರಗಳಿಗೆ ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ ಇವರು ಅಧ್ಯಕ್ಷರಾಗಿದ್ದು, ಪ್ರಾದೇಶಿಕ ಆಯುಕ್ತರ ಕಛೇರಿಯ ವಿಳಾಸ: 2ನೇ ಮಹಡಿ, ಬಿಎಂಟಿಸಿ ಕಟ್ಟಡ, ಶಾಂತಿನಗರ, ಬೆಂಗಳೂರು–27, ದೂರವಾಣಿ: 080–22109680

ಪಲ್ಲವಿ/ಬಾಬು/ಕೆಎಂ

**<u>ವಾರ್ತಾ ವಿಶೇಷ</u>:**

## ಕರ್ನಾಟಕ ವಿಜ್ಞಾನ, ತಂತ್ರಜ್ಞಾನ ಅಕಾಡೆಮಿಯ ಎಂಟನೇ ಸಮ್ಮೇಳನ

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯನ್ನು ಕರ್ನಾಟಕ ಸರ್ಕಾರವು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಅಂಗಸಂಸ್ಥೆಯಾಗಿ ಪ್ರಸಿದ್ಧ ಬಾಹ್ಯಾಕಾಶ ವಿಜ್ಞಾನಿ ಹಾಗೂ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ನಿವೃತ್ತ ಅಧ್ಯಕ್ಷ ಪ್ರೊ. ಯು. ಆರ್. ರಾವ್‌ರವರ ಅಧ್ಯಕ್ಷತೆಯಲ್ಲಿ ಜುಲೈ 2005ರಲ್ಲಿ ಸ್ಥಾಪಿಸಲಾಗಿದೆ. ಅಕಾಡೆಮಿಯು ಹೆಸರಾಂತ ವಿಜ್ಞಾನಿಗಳು, ಶಿಕ್ಷಣ ತಜ್ಞರು ಹಾಗೂ ಸರ್ಕಾರದ ಹಿರಿಯ ಆಡಳಿತಗಾರರು ಸೇರಿದಂತೆ 21 ಸದಸ್ಯರನ್ನೊಳಗೊಂಡಿದೆ. ವಿಜ್ಞಾನ ಶಿಕ್ಷಣವನ್ನು ಸದೃಢಗೊಳಿಸುವ, ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವನೆಯನ್ನು ಬೆಳೆಸುವ ಹಾಗೂ ಜನಸಾಮಾನ್ಯರಲ್ಲಿ ವೈಜ್ಞಾನಿಕ ಅರಿವನ್ನು ಮೂಡಿಸುವ ಕಾರ್ಯಕ್ರಮಗಳನ್ನು ಕಳೆದ 10 ವರ್ಷಗಳಿಂದ ಅಕಾಡೆಮಿಯು ಯಶಸ್ವಿಯಾಗಿ ರಾಜ್ಯಾದ್ಯಂತ ಆಯೋಜಿಸಿಕೊಂಡು ಬರುತ್ತಿದೆ. ಅವುಗಳಲ್ಲಿ ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಸಮ್ಮೇಳನವು ಬಹಳ ಮುಖ್ಯ ಕಾರ್ಯಕ್ರಮವಾಗಿದೆ.

ಅಕಾಡೆಮಿಯು ಪ್ರಧಾನ ಸಮ್ಮೇಳನವನ್ನು 2007 ರಿಂದ ಪ್ರತಿ ವರ್ಷ ಆಯೋಜಿಸಿಕೊಂಡು ಬರುತ್ತಿದೆ. ಅಕಾಡೆಮಿ ಸಮ್ಮೇಳನಗಳ ಮುಖ್ಯ ಉದ್ದೇಶವೆಂದರೆ ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಾಗುತ್ತಿರುವ ಸಂಶೋಧನೆಗಳು ಮತ್ತು ಆವಿಷ್ಕಾರಗಳ ಬಗ್ಗೆ ವಿಜ್ಞಾನ ಶಿಕ್ಷಕರಿಗೆ, ಉಪನ್ಯಾಸಕರಿಗೆ & ಅಧ್ಯಾಪಕರಿಗೆ; ಪದವಿ & ಸ್ನಾತಕೋತ್ತರ ವಿಜ್ಞಾನ ವಿದ್ಯಾರ್ಥಿಗಳಿಗೆ; ರಾಜ್ಯ ಸರ್ಕಾರದ ವಿವಿಧ ಇಲಾಖೆಗಳ ಅಧಿಕಾರಿಗಳಿಗೆ ಮತ್ತು ವಿಜ್ಞಾನಾಸಕ್ತರಿಗೆ ಅರಿವು ಮೂಡಿಸುವುದು. ಈ ಸಮ್ಮೇಳನಗಳು ಹಿರಿಯ ಶ್ರೇಷ್ಠ ವಿಜ್ಞಾನಿಗಳ ಹಾಗೂ ಉತ್ಸಾಹಿ ಯುವ ಸಂಶೋಧಕರ ಸಂವಾದಕ್ಕೆ ಅತ್ಯುತ್ತಮ ವೇದಿಕೆಯಾಗಿವೆ.

ಅಕಾಡೆಮಿಯ ಎಂಟನೇ ವಾರ್ಷಿಕ ಸಮ್ಮೇಳನವನ್ನು "**ಹೊಸ ಪರಂಪರೆಯ ನಗರ ಪ್ರದೇಶಾಭಿವೃದ್ಧಿಗೆ ವಿಜ್ಞಾನ ಮತ್ತು ತಂತ್ರಜ್ಞಾನ**" (Science & Technology for GenNext Urban Space) ಎಂಬ ಕೇಂದ್ರ ವಿಷಯದಡಿ, ಬೆಂಗಳೂರಿನ ವಿ.ವಿ. ಪುರಂನಲ್ಲಿರುವ ಬೆಂಗಳೂರು ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿಯ (BIT) ಸಹಯೋಗದೊಂದಿಗೆ ಎರಡು ದಿನಗಳ ಕಾಲ **2015ರ ನವೆಂಬರ್ 5 ಮತ್ತು 6 ರಂದು (ಗುರುವಾರ ಮತ್ತು ಶುಕ್ರವಾರ)** ಆಯೋಜಿಸಲಾಗುತ್ತಿದೆ.

ಈ ಸಮ್ಮೇಳನದ ಉದ್ಘಾಟನೆಯನ್ನು ದಿನಾಂಕ 5ನೇ ನವೆಂಬರ್ 2015ರ (ಗುರುವಾರ) ಬೆಳಗ್ಗೆ 10.00ಕ್ಕೆ ಬೆಂಗಳೂರಿನ ಬೆಂಗಳೂರು ತಾಂತ್ರಿಕ ಮಹಾವಿದ್ಯಾಲಯದ (BIT) ಆವರಣದಲ್ಲಿರುವ ಕುವೆಂಪು ಕಲಾಕ್ಷೇತ್ರದಲ್ಲಿ ಮುಖ್ಯಮಂತ್ರಿ ಶ್ರೀ ಸಿದ್ಧರಾಮಯ್ಯನವರು ಉದ್ಘಾಟಿಸಿ, ಚಾಲನೆ ನೀಡಲಿದ್ದಾರೆ. ಉದ್ಘಾಟನಾ ಸಮಾರಂಭದಲ್ಲಿ ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎಸ್. ಆರ್. ಪಾಟೀಲ್‌ರವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಅಕಾಡೆಮಿಯ ಅಧ್ಯಕ್ಷ ಪ್ರೊ. ಯು. ಆರ್. ರಾವ್‌ರವರು ಪ್ರಧಾನ ಭಾಷಣವನ್ನು ಮಾಡಲಿದ್ದು, ಸಮಾರಂಭದ ಅಧ್ಯಕ್ಷತೆಯನ್ನು ರಾಜ್ಯ ಒಕ್ಕಲಿಗರ ಸಂಘ ಅಧ್ಯಕ್ಷರಾದ ಡಾ. ಅಪ್ಪಾಜಿಗೌಡರವರು ವಹಿಸಲಿದ್ದಾರೆ.

ಈ ಸಮ್ಮೇಳನದ ಉದ್ಘಾಟನಾ ಸಮಾರಂಭದಲ್ಲಿ ದೇಶದ ಬಾಹ್ಯಾಕಾಶ ಸಂಶೋಧನಾ ಕ್ಷೇತ್ರಕ್ಕೆ ಅನನ್ಯ ಕೊಡುಗೆಯನ್ನು ನೀಡಿರುವ ಖ್ಯಾತ ಬಾಹ್ಯಾಕಾಶ ವಿಜ್ಞಾನಿ ಪದ್ಮಭೂಷಣ ಡಾ. ಬಿ. ಎನ್. ಸುರೇಶ್, ನಿವೃತ್ತ ನಿರ್ದೇಶಕರು, ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ಸ್ಪೇಸ್ ಸೈನ್ಸ್ & ಟೆಕ್ನಾಲಜಿ (IIST), ಪ್ರಸ್ತುತ ಡಾ. ವಿಕ್ರಂ ಸಾರಾಭಾಯಿ ಡಿಸ್ಟಿಂಗ್ವಿಷ್ಡ್ ಪ್ರೊಫೆಸರ್ ಇವರಿಗೆ "ಜೀವಮಾನ ಸಾಧನೆ" ಪ್ರಶಸ್ತಿಯನ್ನು ನೀಡಿ ಪುರಸ್ಕರಿಸಲಾಗುವುದು. ಸನ್ಮಾನಿತರಿಗೆ ರೂ. 1.00 ಲಕ್ಷಗಳ ನಗದು, ಚಿನ್ನದ ಪದಕ ಹಾಗೂ ಸನ್ಮಾನ ಪತ್ರಗಳನ್ನು ನೀಡಿ ಗೌರವಿಸಲಾಗುವುದು.

ಸದರಿ ಸಮ್ಮೇಳನದಲ್ಲಿ ರಾಜ್ಯದ ವಿವಿಧ ವಿಶ್ವವಿದ್ಯಾನಿಲಯ ಮತ್ತು ಶಿಕ್ಷಣ ಸಂಸ್ಥೆಗಳ ಉಪನ್ಯಾಸಕರು/ಪ್ರಾಧ್ಯಾಪಕರು, ವಿಜ್ಞಾನಿಗಳು, ಸ್ನಾತಕೋತ್ತರ / ಸಂಶೋಧನಾ ವಿದ್ಯಾರ್ಥಿಗಳು ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ವಿಜ್ಞಾನಾಸಕ್ತರು ಒಳಗೊಂಡಂತೆ ಸುಮಾರು ಒಂದು ಸಾವಿರಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಲಿದ್ದಾರೆ.

ಮೂಲ ಮತ್ತು ಅನ್ವಯಿಕ ವಿಜ್ಞಾನ ಮತ್ತು ತಂತ್ರಜ್ಞಾನಕ್ಕೆ ಸಂಬಂಧಿಸಿದ ಸಂಶೋಧನಾ ಪ್ರಾತ್ಯಕ್ಷಿಕೆಗಳನ್ನು ಸಹ **(Poster Presentation)** ಮಂಡಿಸಲು ಸಂಶೋಧಕರಿಗೆ ಅವಕಾಶವನ್ನು ಕಲ್ಪಿಸಲಾಗಿದ್ದು, ತಜ್ಞ ಸಮಿತಿಯು ಆಯ್ಕೆ ಮಾಡುವ ಅತ್ಯುತ್ತಮವಾದ 3 ಪ್ರಾತ್ಯಕ್ಷಿಕೆಗಳಿಗೆ ಬಹುಮಾನವನ್ನು ನೀಡಲಾಗುವುದು. ಅತ್ಯುತ್ತಮ ಪ್ರಾತ್ಯಕ್ಷಿಕೆಗಳಿಗೆ ನಗದು ಬಹುಮಾನ ನೀಡಲಾಗುತ್ತಿದ್ದು, ಪ್ರಥಮ ಬಹುಮಾನ ರೂ. 20,000/-; ದ್ವಿತೀಯ ಬಹುಮಾನ ರೂ. 15,000/- ಹಾಗೂ ತೃತೀಯ ಬಹುಮಾನ ರೂ. 10,000/- ಆಗಿದೆ.

ಪ್ರಾತ್ಯಕ್ಷಿಕೆಗಳ ಸಾರಾಂಶಗಳನ್ನೊಳಗೊಂಡ ಪುಸ್ತಕವನ್ನು  ಮುಖ್ಯಮಂತ್ರಿಗಳು ಉದ್ಘಾಟನಾ ಸಮಾರಂಭದಲ್ಲಿ ಬಿಡುಗಡೆ ಮಾಡಲಿದ್ದಾರೆ. ಅಲ್ಲದೇ, ಅಕಾಡೆಮಿಯ ಕಾರ್ಯಕ್ರಮಗಳ ಕಿರು ಪರಿಚಯವನ್ನು ನೀಡುವ ಮಾಹಿತಿ ಹೊತ್ತಿಗೆಯನ್ನು  ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಬಿಡುಗಡೆ ಮಾಡಲಿದ್ದಾರೆ.

ಸಮ್ಮೇಳನದ ತಾಂತ್ರಿಕ ಅಧಿವೇಶನದಲ್ಲಿ ಖ್ಯಾತ ವಿಜ್ಞಾನಿಗಳಿಂದ ಮತ್ತು ಸಂಶೋಧಕರಿಂದ ಒಂಬತ್ತು ಶ್ರೇಷ್ಠ ಉಪನ್ಯಾಸಗಳನ್ನು ಏರ್ಪಡಿಸಲಾಗಿದೆ (ಪ್ರತಿ ಲಗತ್ತಿಸಿದೆ). **ದಿನಾಂಕ 5ನೇ ನವೆಂಬರ್ 2015ರಂದು ಸಂಜೆ 6.00ಕ್ಕೆ ಖ್ಯಾತ ಬಾಹ್ಯಾಕಾಶ ವಿಜ್ಞಾನಿ ಹಾಗೂ ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆಯ ನಿವೃತ್ತ ಅಧ್ಯಕ್ಷರಾದ ಪ್ರೊ. ಯು. ಆರ್. ರಾವ್‌ರವರಿಂದ "ಭಾರತೀಯ ಬಾಹ್ಯಾಕಾಶ ಯೋಜನೆಗಳು – ಹಿಂದು, ಇಂದು ಮತ್ತು ಮುಂದು" (Indian Space Program - Past, Present and Future)** ಎಂಬ ವಿಷಯದ ಮೇಲೆ ಸಾರ್ವಜನಿಕ ಭಾಷಣವನ್ನು ಏರ್ಪಡಿಸಲಾಗಿದೆ. ಈ ಸಂದರ್ಭದಲ್ಲಿ ಪ್ರೊ. ರಾವ್‌ರವರನ್ನು ಬೆಂಗಳೂರು ತಾಂತ್ರಿಕ ಮಹಾವಿದ್ಯಾಲಯದ ವತಿಯಿಂದ ಸನ್ಮಾನಿಸಲಾಗುವುದು. ಆನಂತರ, ಮಹಾವಿದ್ಯಾಲಯದ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಬಾಬು:ಕೆಎಂ